## ಕನ್ನಡ ರಾಜ್ಯೋತ್ಸವದಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮಹತ್ವದ ಘೋಷಣೆ

# ಕರ್ನಾಟಕದ ಉತ್ಪನ್ನಕ್ಕೆ ಕನ್ನಡ ಮೊಹರು

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಕರ್ನಾಟಕದಲ್ಲಿ ತಯಾರಾಗುವ ಉತ್ಪನ್ನಗಳ ಮೇಲೆ ಕನ್ನಡದಲ್ಲೂ ಮಾಹಿತಿ ಇರಬೇಕೆಂಬ ಮಹತ್ವದ ಚಿಂತನೆಯನ್ನು ಹೊರಹಾಕಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಈ ನಿಟ್ಟಿನಲ್ಲಿ ಕ್ರಮಕೈಗೊಳ್ಳುವುದಾಗಿಯೂ ಘೋಷಿಸಿದ್ದಾರೆ.

» ರಾಜ್ಯೋತ್ಸವ, ಸುವರ್ಣ ಮಹೋತ್ಸವ ಪ್ರಶಸ್ತಿ ಪ್ರದಾನ

» ವಿಧಾನಸೌಧ ಆವರಣದಲ್ಲಿ ಮೊಳಗಿದ ಕನ್ನಡದ ಕಹಳೆ

ಶುಕ್ರವಾರ ವಿಧಾನಸೌಧದ ಪ್ರಧಾನ ಮೆಟ್ಟಿಲುಗಳ ಮೇಲೆ ನಡೆದ ಕನ್ನಡ ರಾಜ್ಯೋತ್ಸವ ಹಾಗೂ ಸುವರ್ಣ ಮಹೋತ್ಸವ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಸಿಎಂ ಈ ನಿರ್ಧಾರ ಪ್ರಕಟಿಸಿದರು. ಕರ್ನಾಟಕದಲ್ಲಿ ಉತ್ಪಾದನೆಯಾಗುವ ಉತ್ಪನ್ನಗಳ ಮೇಲೆ ಸದ್ಯ ಇಂಗ್ಲಿಷ್ ಮಾತ್ರವಿರುತ್ತದೆ. ಮುಂದೆ ಕನ್ನಡದ ಹೆಸರೂ ಇರುವಂತೆ ಮಾಡಲು ನಾವು ಸಿದ್ಧ ಎಂದರು.

ಮೈಸೂರು ಜಿಲ್ಲಾಧಿಕಾರಿ ಹಳೆಯ ಕಚೇರಿ . (ಅಠಾರ ಕಚೇರಿ)ಯನ್ನು ಕನ್ನಡ ಮ್ಯೂಸಿಯಂ ಮಾಡುವ ಮತ್ತೊಂದು ಘೋಷಣೆಯನ್ನೂ ಸಿದ್ದರಾಮಯ್ಯ ಹೊರಡಿಸಿದರು.

ಕರ್ನಾಟಕ ಎಂದು ನಾಮಕರಣವಾಗಿ ಐವತ್ತು ವರ್ಷ ಪೂರ್ಣಗೊಂಡ ಹಿನ್ನೆಲೆಯಲ್ಲಿ ಬಜೆಟ್‌ನಲ್ಲಿ ಹಣ ಮೀಸಲಿಟ್ಟು ವರ್ಷಪೂರ್ತಿ ಕಾರ್ಯಕ್ರಮ ಮಾಡಿದೆವು. ನಾವೆಲ್ಲ ಕನ್ನಡದ ವಾತಾವರಣ ನಿರ್ಮಾಣ ಮಾಡುತ್ತೇವೆ ಎಂದು ಸಂಕಲ್ಪ ಮಾಡೋಣ ಎಂದು ನಾಡಿನ ಜನರಿಗೆ ಕರೆ ನೀಡಿದ ಅವರು ನಮ್ಮಲ್ಲಿಗೆ ಬಂದಿರುವ ಅನ್ಯ ಭಾಷಿಕರೂ ಕನ್ನಡ ಕಲಿಯುವಂತೆ ಮಾಡಿ ಕನ್ನಡ ವಾತಾವರಣ ನಿರ್ಮಿಸಿದರೆ ನಾಡಿಗೆ ಸಲ್ಲಿಸುವ ಗೌರವವಾಗಿರುತ್ತದೆ ಎಂದು ಅಭಿಪ್ರಾಯಪಟ್ಟರು.

◐ ಪುಟ 2

ವಿಜಯವಾಣಿ ಚಿತ್ರ



ವಿಧಾನಸೌಧದ ಪ್ರಧಾನ ಮೆಟ್ಟಿಲುಗಳ ಮೇಲೆ ಶುಕ್ರವಾರ ಸಂಜೆ ನಡೆದ ಕಾರ್ಯಕ್ರಮದಲ್ಲಿ ಶಿಲ್ಪಿ ಅರುಣ್ ಯೋಗಿರಾಜ್, ಮಾಜಿ ಸಿಎಂ ಹಾಗೂ ಸಾಹಿತಿ ವೀರಪ್ಪ ಮೊಯ್ಲಿ, ಹಿರಿಯ ನಟಿ ಹೇಮಾ ಚೌಧರಿ, ರಾಜ್ಯ ಸರ್ಕಾರದ ಮಾಜಿ ಮುಖ್ಯ ಕಾರ್ಯದರ್ಶಿ ಎಸ್.ವಿ.ರಂಗನಾಥ್, ಕ್ರೀಡಾ ಸಾಧಕ ಜೂಡ್ ಫೆಲಿಕ್ಸ್ ಸೆಬಾಸ್ಟಿಯನ್ ಸೇರಿ 69 ಸಾಧಕರಿಗೆ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಮಾಡಲಾಯಿತು. ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್, ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಸಚಿವರಾದ ಪರಮೇಶ್ವರ್, ಶಿವರಾಜ್ ತಂಗಡಗಿ, ಭೈರತಿ ಸುರೇಶ್ ಇದ್ದರು.

# ಕನ್ನಡ ನಿಂದನೆ ನಾಡದ್ರೋಹ ಸಿಎಂ ಎಚ್ಚರಿಕೆ

ಬೆಂಗಳೂರು: ಸಾಮಾಜಿಕ ಜಾಲತಾಣಗಳಲ್ಲಿ ಕನ್ನಡ, ಕನ್ನಡಿಗರನ್ನು ಹೀಯಾಳಿಸುವ ಪ್ರವೃತ್ತಿ ಹೆಚ್ಚಾಗುತ್ತಿದೆ. ಇದನ್ನು ನಾಡದ್ರೋಹವೆಂದು ಪರಿಗಣಿಸಿ ಕಿಡಿಗೇಡಿಗಳ ವಿರುದ್ಧ ಸರ್ಕಾರ ಮುಲಾಜಿಲ್ಲದೆ ಕ್ರಮ ಕೈಗೊಳ್ಳಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಕೆ ಕೊಟ್ಟಿದ್ದಾರೆ. ಶಾಲಾ ಶಿಕ್ಷಣ, ಸಾಕ್ಷರತಾ ಇಲಾಖೆ ಕಂಠೀರವ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಸಿಎಂ ಮಾತನಾಡಿದರು. 'ನಾವು ಕನ್ನಡಿಗರ ಅವಹೇಳನ ಸಹಿಸುವುದಿಲ್ಲ. ಕನ್ನಡಿಗರು ಕನ್ನಡವನ್ನು ವ್ಯಾವಹಾರಿಕ ಭಾಷೆಯಾಗಿ ಬಳಸುವ ಜತೆಗೆ ಇತರರ ಜತೆಗೂ ಕನ್ನಡದಲ್ಲಿಯೇ ಮಾತನಾಡುವ ಶಪಥ ಮಾಡಬೇಕು' ಎಂದು ಕರೆ ಕೊಟ್ಟರು.

◐ ಪುಟ 2

ಕನ್ನಡಿಗರಾಗಿ ಬದುಕಿನ ಪ್ರತಿ ಕ್ಷಣ ಕನ್ನಡವನ್ನೇ ಉಸಿರಾಗಿಸಿಕೊಳ್ಳಬೇಕು. ಈ ವರ್ಷ ಬೆಂಗಳೂರು ನಗರದಲ್ಲಿ ಎಲ್ಲ ಖಾಸಗಿ ಸಂಸ್ಥೆಗಳು, ಶಾಲಾ, ಕಾಲೇಜು ಹಾಗೂ ವಿದ್ಯಾಸಂಸ್ಥೆಗಳು ತಮ್ಮ ಕಚೇರಿಯಲ್ಲಿ ಕಡ್ಡಾಯವಾಗಿ ಕನ್ನಡ ರಾಜ್ಯೋತ್ಸವ ಆಚರಣೆ ಮಾಡಬೇಕು ಎಂದು ಆದೇಶ ಮಾಡಿದ್ದೇವೆ. ನಮ್ಮ ನಾಡು ಸರ್ವ ಜನಾಂಗದ ಶಾಂತಿಯ ತೋಟ. ಇದೇ ನಮ್ಮ ವಿಶೇಷತೆ.

| ಡಿ.ಕೆ.ಶಿವಕುಮಾರ್ ಡಿಸಿಎಂ

# ಅನುರಣಿಸಿದ ಕನ್ನಡ ಡಿಂಡಿಮ





ದೀಪಾವಳಿ ಸಂಭ್ರಮದ ಮಧ್ಯೆ ರಾಜ್ಯದ ನಾನಾ ಕಡೆ ಶುಕ್ರವಾರ ಕನ್ನಡದ ರಾಜ್ಯೋತ್ಸವದ ಸಂಭ್ರಮ ಮುಗಿಲು ಮುಟ್ಟಿತ್ತು. ಎಲ್ಲ ಕಡೆ ಕನ್ನಡದ ಧ್ವಜಗಳು ರಾರಾಜಿಸಿದವು. ಕನ್ನಡ ಸಂಘಟನೆಗಳು ತಾಯಿ ಭುವನೇಶ್ವರಿಯ ಮೆರವಣಿಗೆ ನಡೆಸಿದವು. ಪ್ರಮುಖ ವೃತ್ತಗಳಲ್ಲಿ ಕನ್ನಡದ 'ದೀಪ' ಪ್ರಜ್ವಲಿಸಿತು. ನಾಡು ನುಡಿಯ ನಿನಾದ ಮೊಳಗಿತು. ಕಣ ಕಣದಲ್ಲೂ ಕನ್ನಡ ಕುಣಿದಾಡಿತು. ಸರಕಾರಿ ಕಚೇರಿಗಳಲ್ಲಿ ಕನ್ನಡ ಬಾವುಟ ಹಾರಾಡುತ್ತಿತ್ತು. ಮಕ್ಕಳ ನೃತ್ಯ, ಗಾಯನಗಳು, ಸಂಜೆ ರಸಮಂಜರಿ ಕಾರ್ಯಕ್ರಮಗಳು ಕನ್ನಡ ರಾಜ್ಯೋತ್ಸವಕ್ಕೆ ಮೆರಗು ತಂದಿತು. ಬೆಂಗಳೂರಿನ ವಿಧಾನಸೌಧದ ಮುಂಭಾಗ ಸಾಧಕ ಕನ್ನಡಿಗರಿಗೆ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಮಾಡಲಾಯಿತು.



